# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 18.09.2021

**ದಿನಾಂಕ: 18.09.2021 ರಂದು ನಡೆದ ವಾರ್ಡ್ ನಂ.08 ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಶ್ರೀನಿವಾಸಮೂರ್ತಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಡಾ|| ದಯಾಕರ್, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ,
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಆರೋಗ್ಯ
- ಶ್ರೀಮತಿ ಕವಿತ, ಕಿರಿಯ ಆರೋಗ್ಯ ಪರೀವಿಕ್ಷಕರು, ಆರೋಗ್ಯ
- ಶ್ರೀ ಬಾಬುರೆಡ್ಡಿ ಕೆ.ಎನ್, ಕಿರಿಯ ಅಭಿಯಂತರರು (ವಿದ್ಯುತ್ ವಿಭಾಗ), ಬಿಬಿಎಂಪಿ
- ಶ್ರೀ ಬಲಪ್ಪ, ಪೊಲೀಸ್ ಸಬ್ ಇನ್ಸಪೆಕ್ಟರ್, ಕೊಡಿಗೇಹಳ್ಳಿ ಪೊಲೀಸ್ ಠಾಣೆ

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಕಾರ್ಯದರ್ಶಿ, ವಸತಿ ಕ್ಷೇಮಾಭಿವೃದ್ಧಿ ಸಂಘ
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀಮತಿ ನಾಗರತ್ನ, ಮುನೇಶ್ವರ ಬ್ಲಾಕ್ ಸದಸ್ಯರು
- ಶ್ರೀಮತಿ ಜ್ಯೋತಿ ಎಸ್. ಆಚಾರ್ಯ, ಹಿರನಂದಾನಿ ವಸತಿ ಕ್ಷೇಮಾಭಿವೃದ್ಧಿ ಸಂಘ

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ

ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು.

1. ಘನತ್ಯಾಜ್ಯ ನಿರ್ವಹಣೆ:
   1. ಆಮ್ಕೋ ಬಡಾವಣೆಯಲ್ಲಿರುವ ಜಗನ್ನಾಥ್ ದೇವಸ್ಥಾನದ ಎದುರು ಕಸದ ರಾಶಿ ಕಂಡುಬಂದಿದ್ದು, ಸುತ್ತಮುತ್ತಲಿನ ಪ್ರದೇಶದಲ್ಲಿ ದುರ್ವಾಸನೆಯಿಂದ ದೇವಸ್ಥಾನಕ್ಕೆ ಹೋಗುವ ಭಕ್ತಾದಿಗಳಿಗೆ ಹಾಗೂ ರಸ್ತೆಯಲ್ಲಿ ಓಡಾಡುವ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿದೆ ಎಂದು ಸಭೆಗೆ ತಿಳಿಸಿದರು.
   2. ಟಾಟಾನಗರದ ಮುಖ್ಯರಸ್ತೆಯಲ್ಲಿ ಬ್ಲಾಕ್‌ಸ್ಪಾಟ್ ತೆರವುಗೊಳಿಸಲು ಕ್ರಮ ತೆಗೆದುಕೊಳ್ಳುವಂತೆ ಸಭೆಗೆ ತಿಳಿಸಿದರು.

2. ಆರೋಗ್ಯ ಇಲಾಖೆ:
   1. ಕೋವಿಡ್ 3ನೇ ಅಲೆ ಹರಡುವ ಸಾಧ್ಯತೆಯಿದ್ದು, ಕೋವಿಡ್ ಸೋಂಕಿನ ಬಗ್ಗೆ ಎಚ್ಚರವಹಿಸಲು ಅಧಿಕಾರಿಗಳು ಸಮಿತಿ ಸದಸ್ಯರಿಗೆ ಮನದಟ್ಟು ಮಾಡಿರುತ್ತಾರೆ.
   2. ವಸತಿ ಸಮುಚ್ಚಯಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪರಿಶೀಲಿಸಲು ನಿಯಮಿತ ತಪಾಸಣೆಯನ್ನು ಕೈಗೊಳ್ಳುವುದು.
   3. ಅಂಗಡಿಗಳ ಮಾಲೀಕರು ವ್ಯಾಪಾರ ಪರವಾನಿಗೆಯನ್ನು ಪಡೆಯದೇ ವ್ಯಾಪಾರ ಮಾಡುತ್ತಿರುವವರ ವಿರುದ್ಧ ಕ್ರಮಕೈಗೊಳ್ಳುವುದು.
   4. ಸಹಕಾರನಗರದ ಹಾಪ್‌ಕಾಮ್ಸ್ ಅಂಗಡಿಯ ವಸ್ತುಗಳನ್ನು ಫುಟ್‌ಪಾತ್ ಒತ್ತುವರಿ ಮಾಡಿಕೊಂಡು ವ್ಯಾಪಾರ ನಡೆಸುತ್ತಿರುವುದು ಕಂಡುಬಂದಿದ್ದು, ಮಾಲೀಕರಿಗೆ ನೋಟಿಸ್ ಕೊಡಲು ಕ್ರಮವಹಿಸುವುದು.
   5. ಹೊರ ರಾಜ್ಯಗಳಿಂದ ಬರುವ ಪ್ರಯಾಣಿಕರು ಕಂಡುಬಂದಲ್ಲಿ ಸುತ್ತಮುತ್ತಲಿನ ಜನರು ಆರೋಗ್ಯ ಇಲಾಖೆಯವರಿಗೆ ಮಾಹಿತಿ ಕೊಡಬೇಕೆಂದು, ಅವರಿಗೆ ಕೋವಿಡ್ ಪರೀಕ್ಷೆ ನಡೆಸಲು ಕ್ರಮವಹಿಸಬೇಕೆಂದು ಸಭೆಗೆ ತಿಳಿಸಿದರು.

3. ಕಾಮಗಾರಿ ವಿಭಾಗ:

1. 2021-22 ನೇ ಸಾಲಿನ ಅನುದಾನದಲ್ಲಿ ಕಾಯ್ದಿರಿಸಲಾಗಿರುವ POW ಮತ್ತು ವಿವಿಧ ಪಿಕೋಡ್ ರಡಿಯಲ್ಲಿ ಪರಿಗಣಿಸಬೇಕಾದ ಕಾಮಗಾರಿಗಳ ಬಗ್ಗೆ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿ ಅನುಮೋದನೆ ಪಡೆಯಬೇಕೆಂದು ಸೂಚಿಸಲಾಗಿರುತ್ತದೆ. ಅದರಂತೆ ವಾರ್ಡ್ ಕಾರ್ಯಕ್ರಮಗಳ ಪಟ್ಟಿಗೆ ಅನುಮೋದನೆಯನ್ನು ಪಡೆಯಲು ಕಡತವನ್ನು ಅನುಮೋದನೆಗಾಗಿ ಕಡತವನ್ನು ಸಲ್ಲಿಸಲಾಗಿರುತ್ತದೆ.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:

1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು.
2. ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
3. ಬೀದಿ ದೀಪಗಳ ಸಮಸ್ಯೆ ಇದ್ದಲ್ಲಿ ಅದನ್ನು ವಾರ್ಡ್ ಸಮಿತಿಯ ವಾಟ್ಸ್‌ಆಫ್ ಗ್ರೂಪ್‌ನಲ್ಲಿ ತಿಳಿಸುವುದು, ಇದರ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸುವುದು.

5. ಜಲಮಂಡಳಿ ವಿಭಾಗ:

1. ರಸ್ತೆ ಡಾಂಬರೀಕರಣ ಮುಗಿದ ನಂತರ ಸ್ಯಾನಿಟರಿ ಚೇಂಬರ್‌ಗಳ ಮಟ್ಟವನ್ನು ರಸ್ತೆ ಮಟ್ಟಕ್ಕೆ ಸರಿಪಡಿಸುವುದು.
2. ಕೊಡಿಗೇಹಳ್ಳಿ ರಸ್ತೆಯಲ್ಲಿ ನಿರ್ವಹಿಸಿರುವ ಒಳಚರಂಡಿ ಕಾಮಗಾರಿಯ ಇಳಿಜಾರು ಸರಿಯಿಲ್ಲದೆ ಇದ್ದು, ಇದನ್ನು ಕೂಡಲೇ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿರುತ್ತಾರೆ.
3. ಬಿಬಿಎಂಪಿಯಿಂದ ಕೊರೆದಿರುವ ಬೋರ್‌ವೇಲ್‌ಗಳನ್ನು ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ವರ್ಗಾವಣೆ ಮಾಡಲು ಕ್ರಮವಹಿಸುವುದು.
4. ತಮ್ಮ ಇಲಾಖೆ ವತಿಯಿಂದ ರಸ್ತೆ ಅಗೆದರೆ ಅದನ್ನು ನಿಯಾಮಾನುಸಾರ ಸರಿಪಡಿಸುವುದು.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08